ದಿನಾಂಕಃ **16.12.2025**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

<u>ಪಾಟೀ ಸವಾಲುಃ ವಾದಿ ಪರ ಶ್ರೀ ಕೆ.ಎಸ್.ಹೆಚ್. ವಕೀಲರಿಂದಃ</u>

ಈ ದಾವೆಯನ್ನು ವಾದಿ ಸರ್ವೆ ನಂ. 129 ರಲ್ಲಿ 7 ಎಕರೆ 20 ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಹೂಡಿರುತ್ತಾರೆ. ವಾದಿ ಮತ್ತು ಪ್ರತಿವಾದಿಗಳು ದಾವಾ ಸ್ವತ್ತಿನಲ್ಲಿ ಜಂಟಿ ಸ್ವಾಧೀನಾನುಭವದಲ್ಲಿದ್ದರು ಎಂದು ಸೂಚಿಸಿದ್ದಕ್ಕೆ ಸಾಕ್ಷಿಯು ಸೈಯ್ಯದ್ ಗಫೂರ್ ಸಾಬ್‌ರವರು 1 ಎಕರೆ ಜಮೀನನ್ನು ಖರೀದಿ ಮಾಡಿರುತ್ತಾರೆ ಎಂದು ಉತ್ತರಿಸಿರುತ್ತಾರೆ. ಸದರಿ ಕ್ರಯ ಪತ್ರವನ್ನು ನೀವು ನೋಡಿರುತ್ತೀರಾ ಎಂದು ಪ್ರಶ್ನಿಸಿದ್ದಕ್ಕೆ ಸಾಕ್ಷಿಯು ಸದರಿ ಕ್ರಯ ಪತ್ರವನ್ನು ನಾನು ನೋಡಿರುವುದಿಲ್ಲ ಆದರೆ ನನಗೆ ಬುದ್ದಿ ಬಂದಾಗಿನಿಂದಲೂ ಸದರಿ 1 ಎಕರೆ ಜಮೀನನ್ನು ಸೈಯ್ಯದ್ ಗಫೂರ್ ಸಾಬ್‌ರವರು ಸಾಗುವಳಿ ಮಾಡುತ್ತಿರುತ್ತಾರೆ, 5 ಎಕರೆ 9 ಗುಂಟೆ ಜಮೀನನ್ನು 4 ಜನ ಅಣ್ಣ-ತಮ್ಮಂದಿರು ಒಟ್ಟಿಗೆ ಸಾಗುವಳಿ ಮಾಡುತ್ತಿರುತ್ತಾರೆ ಮತ್ತು ಒಂದುವರೆ ಎಕರೆ ಜಮೀನನ್ನು ವಾದಿ ಮತ್ತು 1 ನೇ ಪ್ರತಿವಾದಿ ಜಂಟಿಯಾಗಿ ಸಾಗುವಳಿ ಮಾಡುತ್ತಿರುತ್ತಾರೆ ಎಂದು ಉತ್ತರಿಸಿರುತ್ತಾರೆ. 1 ಎಕರೆ ಜಮೀನನ್ನು 1 ನೇ ಪ್ರತಿವಾದಿ ಖರೀದಿ ಮಾಡಿರುವ ವಿಚಾರವನ್ನು ಹೊರತು ಪಡಿಸಿ ನನಗೆ ಬೇರೆ ವಿಚಾರಗಳು ಗೊತ್ತಿರುವುದಿಲ್ಲ ಎಂದರೆ ಸರಿ.

**2.** ನನ್ನ ಜನ್ಮ ದಿನಾಂಕ ಹೇಳಲು ಆಗುವುದಿಲ್ಲ. ನನಗೆ 6 ವರ್ಷ ವಯಸ್ಸಾಗಿದ್ದಾಗ ಆಸ್ತಿಗಳು ಯಾರಿಗೆ ಸೇರಿರುತ್ತವೆ ಎಂಬ ಬಗ್ಗೆ ಗೊತ್ತಾಗಿರುತ್ತದೆ. ಸಾಕ್ಷಿಯು ಮುಂದುವರೆದು ನನಗೆ 10 ವರ್ಷ ವಯಸ್ಸಾಗಿದ್ದಾಗಿನಿಂದ ಆಸ್ತಿಗಳು ಯಾರಿಗೆ ಸೇರಿರುತ್ತವೆ ಎಂಬ ಬಗ್ಗೆ

ಗೊತ್ತಾಗಿರುತ್ತದೆ. ವಾದಿ ಮತ್ತು ವಾದಿಯ ಅಣ್ಣ-ತಮ್ಮಂದಿರು ವಿಭಾಗ ಮಾಡಿಕೊಂಡಿರುವುದಿಲ್ಲ.

**3.** ನನ್ನ ಸಾಕ್ಷಿ ಪ್ರಮಾಣ ಪತ್ರದಲ್ಲಿ ನಮೂದು ಮಾಡಿರುವ ದಿ:15.07.1997 ರ ಕ್ರಯ ಪತ್ರದ ಬಗ್ಗೆ ನಿಖರವಾದ ಮಾಹಿತಿ ಇರುವುದಿಲ್ಲ. ದಾವಾ ಸ್ವತ್ತಿನ ಪಕ್ಕದಲ್ಲಿ ಗೊಟ್ಟಗುರುಕಿ ಗೊಲ್ಲರಹಟ್ಟಿ ಗ್ರಾಮಕ್ಕೆ ಸೇರಿದ ಸರ್ವೆ ನಂ. 132 ರಲ್ಲಿ ನನಗೆ 2 ಎಕರೆ 20 ಗುಂಟೆ ಜಮೀನು ಇರುತ್ತದೆ. ಸದರಿ ಜಮೀನಿಗೆ ಸಂಬಂಧಿಸಿದ ದಾಖಲೆ ಹಾಜರು ಪಡಿಸಲು ನನಗೆ ಯಾವುದೇ ತೊಂದರೆ ಇರುವುದಿಲ್ಲ. 1 ನೇ ಪ್ರತಿವಾದಿಯ ವಾರಸುದಾರರ ಬಗ್ಗೆ ನಿಖರವಾಗಿ ಹೇಳಲು ಆಗುವುದಿಲ್ಲ. ನಾನು ಮತ್ತು 1 ನೇ ಪ್ರತಿವಾದಿಯ ವಾರಸುದಾರರಾದ ನೂರುಲ್ಲಾ ತುಂಬಾ ವಿಶ್ವಾಸ್ತರು ಎಂದರೆ ಸರಿ. ನೂರುಲ್ಲಾರವರ ಹೇಳಿಕೆಯ ಮೇರೆಗೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-

(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ